Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

13.01.2025 14.30 hrs

<><*<><>*><>

ಮುಖ್ಯಾಂಶಗಳು

- **ಕನ್ನಡ ಪುಸ್ತಕ ಪ್ರಾಧಿಕಾರದ ಮನೆಗೊಂದು ಗ್ರಂಥಾಲಯ ಯೋಜನೆ ಉದ್ಘಾಟಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ**
- **ರಾಜ್ಯದಲ್ಲಿ ಮುಖ್ಯಮಂತ್ರಿ ಸ್ಥಾನ ಖಾಲಿ ಇಲ್ಲ; ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ**
- **ಎಚ್.ಎಂ.ಟಿ ಕಾರ್ಖಾನೆ ಸ್ಥಗಿತಗೊಳಿಸದಂತೆ ಕೇಂದ್ರ ಸಚಿವ ಕುಮಾರಸ್ವಾಮಿ ಅವರಿಗೆ ಸಂಸ್ಥೆಯ ಸಿಬ್ಬಂದಿ ಮನವಿ**
- **ಮಂಡ್ಯ ಮೈಶುಗರ್ ಸಕ್ಕರೆ ಕಾರ್ಖಾನೆ ಖಾಸಗೀಕರಣವಿಲ್ಲ- ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಸ್ಪಷ್ಟನೆ**
- **ಪ್ರಯಾಗ್‌ರಾಜ್‌ನಲ್ಲಿ ಶತಮಾನದ ಮಹಾಕುಭಮೇಳಕ್ಕೆ ಚಾಲನೆ; ಭದ್ರತೆಗೆ ಎಐ ತಂತ್ರಜ್ಞಾನ ಬಳಕೆ**

<><*<><>*><>

ಕನ್ನಡ ಪುಸ್ತಕ ಪ್ರಾಧಿಕಾರದ ಮಹತ್ವಾಕಾಂಕ್ಷೆಯ ಯೋಜನೆಯಾದ 'ಮನೆಗೊಂದು ಗ್ರಂಥಾಲಯ' ಯೋಜನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಗೃಹ ಕಚೇರಿ ಕೃಷ್ಣಾದಲ್ಲಿ ಉದ್ಘಾಟಿಸಿದರು. ಇದೇ ಸಂದರ್ಭದಲ್ಲಿ ಪ್ರಾಧಿಕಾರ ಪ್ರಕಟಿಸಿರುವ ಕುಮಾರ ವ್ಯಾಸಭಾರತ ಸಂಪುಟಗಳನ್ನು ಲೋಕಾರ್ಪಣೆಗೊಳಿಸಿದರು. 'ಮನೆಗೊಂದು ಗ್ರಂಥಾಲಯ'ದ ಮೊದಲ ಗ್ರಂಥಾಲಯವನ್ನು ಮುಖ್ಯಮಂತ್ರಿಗಳ ಗೃಹ ಕಚೇರಿ ಕೃಷ್ಣಾದಲ್ಲಿಯೇ ಸ್ಥಾಪಿಸುತ್ತಿದ್ದು, ಹಿರಿಯ ಸಾಹಿತಿ ನಾಡೋಜ ಡಾ. ಹಂಪ ನಾಗರಾಜಯ್ಯ ಇದಕ್ಕೆ ಚಾಲನೆ ನೀಡಿದರು. ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಪುರುಷೋತ್ತಮ ಬಿಳಿಮಲೆ ಗ್ರಂಥಾಲಯ ಫಲಕವನ್ನು ಅನಾವರಣಗೊಳಿಸಿದರು. ಮನೆಗೊಂದು ಗ್ರಂಥಾಲಯ ಯೋಜನೆಯಡಿ ರಾಜ್ಯದಾದ್ಯಂತ ಪ್ರಸಕ್ತ ಸಮಿತಿಯ ಅವಧಿಯಲ್ಲಿ ಒಂದು ಲಕ್ಷ ಮನೆಗಳಲ್ಲಿ ಗ್ರಂಥಾಲಯ ಸ್ಥಾಪಿಸುವ ಗುರಿಯನ್ನು ಹೊಂದಲಾಗಿದೆ. ಪುಸ್ತಕಾಭಿರುಚಿಯನ್ನು ಇಂದಿನ ಯುವಪೀಳಿಗೆಯಲ್ಲಿ ಬೆಳೆಸುವುದು ಇದರ ಮುಖ್ಯ ಉದ್ದೇಶವಾಗಿದೆ.

<><*<><>*><>

ಕಾಂಗ್ರೆಸ್ ಪಕ್ಷದಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸ್ಥಾನವೂ ಖಾಲಿಯಿಲ್ಲ ಎಂದು ಹೇಳಿದ್ದಾರೆ. ಇದೇ ವೇಳೆ ಮಾತನಾಡಿದ ರಾಜ್ಯ ಕಾಂಗ್ರೆಸ್ ಉಸ್ತುವಾರಿ ಮತ್ತು ಪಕ್ಷದ ಪ್ರಧಾನ ಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲಾ, ಬಿಜೆಪಿ ತನ್ನ ಆಂತರಿಕ ಸಮಸ್ಯೆಗಳನ್ನು ಮೊದಲು ಪರಿಹರಿಸಿಕೊಳ್ಳಲಿ ಎಂದು ತಿರುಗೇಟು ನೀಡಿದ್ದಾರೆ.

<><*<><>*><>

ಬೆಳಗಾವಿಯಲ್ಲಿ ಇದೇ ೨೧ ರಂದು ನಡೆಯಲಿರುವ "ಜೈ ಬಾಪು, ಜೈ ಭೀಮ್, ಜೈ ಸಂವಿಧಾನ್" ಸಮಾವೇಶದ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿಂದು ಕಾಂಗ್ರೆಸ್ ಪಕ್ಷದ ಶಾಸಕಾಂಗ ಪಕ್ಷದ ಸಭೆ ನಡೆಯಲಿದೆ. ಸಭೆಯ ಹಿನ್ನೆಲೆಯಲ್ಲಿ ರಾಜ್ಯ ಕಾಂಗ್ರೆಸ್ ಉಸ್ತುವಾರಿ ಮತ್ತು ಪಕ್ಷದ ಪ್ರಧಾನ ಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೆವಾಲ ಬೆಂಗಳೂರಿಗೆ ಆಗಮಿಸಿದ್ದಾರೆ.

"ಜೈ ಬಾಪು, ಜೈ ಭೀಮ್, ಜೈ ಸಂವಿಧಾನ್" ಸಮಾವೇಶದ ಹಿನ್ನೆಲೆಯಲ್ಲಿ ಕೆಪಿಸಿಸಿ ಕಚೇರಿಯಲ್ಲಿಂದು ನಡೆದ ಪೂರ್ವಭಾವಿ ಸಿದ್ಧತೆ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷರೂ ಆದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಹಲವು ಮುಖಂಡರು ಭಾಗವಹಿಸಿದ್ದರು.

<><*<><>*><>

ಹಿಂದೂಸ್ತಾನ್ ವಾಯುಯಾನ ಸಂಸ್ಥೆ-ಎಚ್.ಎಮ್.ಟಿ ಕಾರ್ಖಾನೆಯ ಹಾಲಿ ಹಾಗೂ ನಿವೃತ್ತ ಸಿಬ್ಬಂದಿ ಇಂದು ಬೆಂಗಳೂರಿನಲ್ಲಿ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಭೇಟಿಯಾಗಿ ತಮ್ಮ ಸಮಸ್ಯೆಗಳ ಬಗ್ಗೆ ಚರ್ಚಿಸಿ ಮನವಿ ಸಲ್ಲಿಸಿದರು. ನಿವೃತ್ತರಾಗಿ ಹಲವಾರು ವರ್ಷಗಳೇ ಕಳೆದಿದ್ದರೂ ನಮಗೆ ದೊರೆಯಬೇಕಾದ ಸೌಲಭ್ಯಗಳು ಇನ್ನೂ ಬಂದಿಲ್ಲ. ಈ ಬಗ್ಗೆ ತಾವು ಗಮನ ಹರಿಸಬೇಕು ಎಂದು ಸಚಿವರ ಮುಂದೆ ತಮ್ಮ ಸಮಸ್ಯೆ ಹೇಳಿಕೊಂಡ ನಿವೃತ್ತ ಉದ್ಯೋಗಿಗಳು ಮನವಿ ಸಲ್ಲಿಸಿದರು. ನಮಗೆ ಬರಬೇಕಿರುವ ೩೦ ರಿಂದ ೪೦ ಲಕ್ಷ ರೂಪಾಯಿ ಹಣ ಐದಾರು ವರ್ಷಗಳಿಂದ ಸಂಸ್ಥೆ ಉಳಿಸಿಕೊಂಡಿದೆ ಇದರ ಪಾವತಿಯಾಗಬೇಕು.  ಯಾವುದೇ ಕಾರಣಕ್ಕೂ ದೇಶದ ಪ್ರತಿಷ್ಠೆಯ ಸಂಸ್ಥೆಯಾಗಿದ್ದ ಎಚ್.ಎಂ.ಟಿ ಯನ್ನು ಮುಚ್ಚಬಾರದು  ಎಂದು ಇದೇ ಸಂದರ್ಭದಲ್ಲಿ ಮನವಿ ಮಾಡಲಾಯಿತು. ಉದ್ಯೋಗಿಗಳ ಮನವಿ ಆಲಿಸಿದ ನಂತರ ಮಾತನಾಡಿದ ಕೇಂದ್ರ ಸಚಿವ ಕುಮಾರಸ್ವಾಮಿ ಅವರು  ಕಾರ್ಮೀಕರಿಗೆ ಬಾಕಿ ೩೬೧ ಕೋಟಿ ರೂಪಾಯಿ ಮೊತ್ತ ಪಾವತಿಸುವ ಬಗ್ಗೆ ಸಚಿವಾಲಯದ ಉನ್ನತ ಅಧಿಕಾರಿಗಳ ಜೊತೆ ಚರ್ಚೆ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

<><*<><>*><>

ಮಂಡ್ಯ ಜಿಲ್ಲೆಯ ಏಕೈಕ ಸರ್ಕಾರಿ ಸ್ವಾಮ್ಯದ ಸಕ್ಕರೆ ಕಾರ್ಖಾನೆಯಾದ "ಮೈಶುಗರ್" ಅನ್ನು ಯಾವುದೇ ಕಾರಣಕ್ಕೂ ಖಾಸಗೀಕರಣ ಮಾಡಲಾಗುವುದಿಲ್ಲ ಎಂದು ವಿಧಾನ ಪರಿಷತ್ ಸದಸ್ಯ ದಿನೇಶ ಗೂಳಿಗೌಡ ಸ್ಪಷ್ಟಪಡಿಸಿದ್ದಾರೆ. ಈ ಕುರಿತು ಮಾಧ್ಯಮ ಪ್ರಕಟಣೆ ನೀಡಿರುವ ಅವರು, ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಅಪಪ್ರಚಾರ ಮಾಡುತ್ತಿವೆ ಎಂದು ದೂರಿದ್ದಾರೆ. ಸಾರ್ವಜನಿಕರಾಗಲೀ, ರೈತರಾಗಲೀ ಈ ಸುಳ್ಳು ಸುದ್ದಿಗೆ  ಕಿವಿಗೊಡಬಾರದು. ಸರ್ಕಾರ ರೈತರ ಹಿತ ಕಾಯಲು ಬದ್ಧವಿದೆ ಎಂದು ತಿಳಿಸಿದ್ದಾರೆ. ಈ ವರ್ಷ ೨ ಲಕ್ಷದ ೧ ಸಾವಿರದ ೮೫೦ ಟನ್ ಕಬ್ಬನ್ನು ಅರೆಯಲಾಗಿದೆ. ಸುಮಾರು ೩ ಸಾವಿರದ ೪೦೦ ರಷ್ಟು ರೈತರು ಕಬ್ಬು ಪೂರೈಕೆ ಮಾಡಿದ್ದರು. ಎಲ್ಲ ರೈತರಿಗೆ ಶೇಕಡ ೧೦೦ ರಷ್ಟು ಹಣ ಪಾವತಿ ಮಾಡಲಾಗಿದೆ.  ಕಳೆದ ೨೦ ವರ್ಷಗಳಿಂದ ಬಾಕಿ ಇದ್ದ ೫೨ ಕೋಟಿ ೨೫ ಲಕ್ಷ ರೂಪಾಯಿ ವಿದ್ಯುತ್ ಬಿಲ್ ಅನ್ನು ರಾಜ್ಯ ಸರ್ಕಾರ ಮನ್ನಾ  ಮಾಡಿದೆ. ಹೀಗಾಗಿ ಕಾರ್ಖಾನೆ ಖಾಸಗೀಕರಣ ಮಾಡುವಂತಹ ಯಾವುದೇ ಪ್ರಸ್ತಾವ ಸರ್ಕಾರದ ಮುಂದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿ  ಶತಮಾನ ಮಹಾ ಕುಂಭಮೇಳಕ್ಕೆ ಇಂದು ಚಾಲನೆ ದೊರೆತಿದೆ. ಕುಂಭಮೇಳ ವೀಕ್ಷಿಸಲು ಲಕ್ಷಾಂತರ ಭಕ್ತಾದಿಗಳು ಮತ್ತು ಹಲವಾರು ವಿದೇಶಿ ಪ್ರವಾಸಿಗರು, ಚಳಿಯನ್ನೂ ಲೆಕ್ಕಿಸದೇ ಶಾಹಿ ಸ್ನಾನದಲ್ಲಿ ಭಾಗಿಯಾಗಿದ್ದಾರೆ.  ಸುಮಾರು ೪೦ ಕೋಟಿ ಮಂದಿ ಈ ಮಹಾಕಂಭ ಮೇಳದಲ್ಲಿ ಭಾಗವಹಿಸುವ ಸಾಧ್ಯತೆಯಿದ್ದು, ಇದೇ ಮೊದಲ ಬಾರಿಗೆ ಭದ್ರತೆಗೆ ಎಐ ತಂತ್ರಜ್ಞಾನ ಬಳಕೆ ಮಾಡಲಾಗಿದೆ. ಕೃತಕ ಬುದ್ದಿಮತ್ತೆ ಅಂದರೆ, ಆರ್ಟಿಫಿಶಿಯಲ್ ಇಂಟೆಲಿಜೆನ್ಸ್ ಮತ್ತು ಸೈಬರ್ ಸುರಕ್ಷತೆ ತಂತ್ರಜ್ಞಾನಗಳನ್ನು ಪ್ರಯಾಗ್‌ರಾಜ್‌ನಲ್ಲಿ ಬಳಸಿರುವ ಬಗ್ಗೆ ಆಕಾಶವಾಣಿಯೊಂದಿಗೆ ಥೆಟಾ ಡೈನಾಮಿಕ್ಸ್ ಸಂಸ್ಥೆಯ ನಿರ್ದೇಶಕರಾದ ಡಾ.ಉದಯ ಶಂಕರ್ ಪುರಾಣಿಕ್ ಮಾಹಿತಿ ಹಂಚಿಕೊಂಡಿದ್ದಾರೆ.

**ಧ್ವನಿ: ಡಾ.ಉದಯ ಶಂಕರ್ ಪುರಾಣಿಕ್, ಸಂಸ್ಥೆಯ ನಿರ್ದೇಶಕ**

<><*<><>*><>

ನಾಳೆ ಸಂಕ್ರಾಂತಿ ಹಿನ್ನೆಲೆಯಲ್ಲಿ ನಾಡಿನೆಲ್ಲೆಡೆ ಹಬ್ಬದ ಸಂಭ್ರಮ ಮನೆ ಮಾಡಿದೆ. ಬೆಂಗಳೂರಿನ ಗವಿ ಗಂಗಾಧರೇಶ್ವರ ದೇವಾಲಯದಲ್ಲಿ ಶಿವಲಿಂಗಕ್ಕೆ ಸೂರ್ಯ ರಷ್ಮಿ ಸ್ಪರ್ಷಿಸಲಿದೆ. ಈ ಕುತೂಹಲಕ್ಕೆ ಸಾಕ್ಷಿಯಾಗಲು ಸಾವಿರಾರು ಮಂದಿ ಕಾತುರಿಂದ ಕಾಯುತ್ತಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ನಾಳೆ ಸುಗ್ಗಿ ಹಬ್ಬ ಸಂಕ್ರಾಂತಿ ಆಚರಣೆಗೆ ಸಿದ್ದತೆಗಳನ್ನು ಕೈಗೊಳ್ಳಲಾಗುತ್ತಿದೆ. ಕಬ್ಬು, ಕಡಲೇ ಕಾಯಿ, ಗೆಣಸು, ಎಳ್ಳು, ಬೆಲ್ಲ ಮೊದಲಾದ ಅಗತ್ಯ ಸಾಮಗ್ರಿಗಳ ಬೆಲೆ ಹೆಚ್ಚಳದ ನಡುವೆಯೂ ಮಾರುಕಟ್ಟೆಯಲ್ಲಿ ಜನತೆ ಹಬ್ಬಕ್ಕೆ ಸಾಮಗ್ರಿಗಳನ್ನು ಕೊಳ್ಳುತ್ತಿರುವ ದೃಶ್ಯ ಸಾಮಾನ್ಯವಾಗಿದೆ. ಗ್ರಾಮಾಂತರ ಪ್ರದೇಶಗಳಲ್ಲಿ ರೈತರು ರಾಸುಗಳಿಗೆ ಅಲಂಕರಿಸಿ, ಕಿಚ್ಚು ಹಾಯಿಸುವುದು, ಕಾಟಿಮ ರಾಯನ ಪೂಜೆ ಕೈಗೊಳ್ಳವ ಆಚರಣೆಗಳಿಗೆ

ಸಿದ್ಧತೆಗಳನ್ನು ಕೈಗೊಳ್ಳುತ್ತಿದ್ದಾರೆ. ದೊಡ್ಡಬಳ್ಳಾಪುರ ನಗರಸಭೆ ವತಿಯಿಂದ ಕಾರ್ಯಾಲಯದ ಆವರಣದಲ್ಲಿ ಸಂಕ್ರಾಂತಿ ಸುಗ್ಗಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ವರ್ಷದ ಮೊದಲ ಹಬ್ಬ ಮಕರ ಸಂಕ್ರಾಂತಿ ಆಚರಣೆಗೆ ಜನರು ಸಿದ್ಧತೆಯಲ್ಲಿ ತೊಡಗಿದ್ದು, ಹಬ್ಬಕ್ಕೆ ಬೇಕಾದ ವಸ್ತುಗಳನ್ನು ಖರೀದಿಸುತ್ತಿದ್ದಾರೆ. ಮೈಸೂರಿನ ಚಿಕ್ಕಗಡಿಯಾರ, ದೇವರಾಜ ಮಾರುಕಟ್ಟೆ ಸೇರಿದಂತೆ ವಿವಿಧ ಕಡೆಗಳಲ್ಲಿ ಹೂವು-ಹಣ್ಣು, ಪೂಜಾ ಸಾಮಾಗ್ರಿಗಳ ಜೊತೆಗೆ ಎಳ್ಳು- ಬೆಲ್ಲ ಕಬ್ಬು ಖರೀದಿಯಲ್ಲಿ ನಿರತರಾಗಿದ್ದಾರೆ.

<><*<><>*><>

ನವದೆಹಲಿಯಲ್ಲಿ ಇಂದಿನಿಂದ ನಡೆಯುವ ಖೋ ಖೋ ವಿಶ್ವಕಪ್‌ನಲ್ಲಿ ಮೈಸೂರು ಜಿಲ್ಲೆ ಟಿ ನರಸೀಪುರ ತಾಲ್ಲೂಕಿನ ಕುರುಬೂರು ಗ್ರಾಮದ ಚೈತ್ರ ಅವರು ಭಾರತ ತಂಡವನ್ನು ಪ್ರತಿನಿಧಿಸುತ್ತಿದ್ದಾರೆ. ನಾಳೆ ಭಾರತ ಹಾಗೂ ದಕ್ಷಿಣ ಆಫ್ರಿಕಾ ನಡುವೆ ಮಹಿಳಾ ತಂಡದ ಖೋ ಖೋ ಮೊದಲ ಪಂದ್ಯ ನಡೆಯಲಿದೆ. ಚೈತ್ರ ಮಂಡ್ಯ ತಾಲ್ಲೂಕಿನ ಪಾಂಡವಪುರದ ಶ್ರೀ ಶಂಭುಲಿಂಗೇಶ್ವರ ದೈಹಿಕ ಶಿಕ್ಷಣ ಕಾಲೇಜಿನಲ್ಲಿ ಎರಡನೇ ವರ್ಷದ ಬಿಪಿಎಡ್ ವ್ಯಾಸಂಗ ಮಾಡುತ್ತಿದ್ದಾರೆ. ಇದೆ ಮೊದಲ ಬಾರಿಗೆ ಖೋ ಖೋ ವಿಶ್ವ ಕಪ್ ನಲ್ಲಿ ಪಾಲ್ಗೊಳ್ಳುತ್ತಿರುವ ಅವರು ಆಕಾಶವಾಣಿ ಜೊತೆ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ: ಚೈತ್ರ**

<><*<><>*><>

ನಾಳೆ ಸಂಕ್ರಾಂತಿ ಹಿನ್ನೆಲೆಯಲ್ಲಿ ನಾಡಿನೆಲ್ಲೆಡೆ ಹಬ್ಬದ ಸಂಭ್ರಮ ಮನೆ ಮಾಡಿದೆ. ಬೆಂಗಳೂರಿನ ಗವಿ ಗಂಗಾಧರೇಶ್ವರ ದೇವಾಲಯದಲ್ಲಿ ಶಿವಲಿಂಗಕ್ಕೆ ಸೂರ್ಯ ರಷ್ಮಿ ಸ್ಪರ್ಷಿಸಲಿದೆ. ಈ ಕುತೂಹಲಕ್ಕೆ ಸಾಕ್ಷಿಯಾಗಲು ಸಾವಿರಾರು ಮಂದಿ ಕಾತುರಿಂದ ಕಾಯುತ್ತಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ನಾಳೆ ಸುಗ್ಗಿ ಹಬ್ಬ ಸಂಕ್ರಾಂತಿ ಆಚರಣೆಗೆ ಸಿದ್ಧತೆಗಳನ್ನು ಕೈಗೊಳ್ಳಲಾಗುತ್ತಿದೆ. ಕಬ್ಬು, ಕಡಲೇ ಕಾಯಿ, ಗೆಣಸು, ಎಳ್ಳು, ಬೆಲ್ಲ ಮೊದಲಾದ ಅಗತ್ಯ ಸಾಮಗ್ರಿಗಳ ಬೆಲೆ ಹೆಚ್ಚಳದ ನಡುವೆಯೂ ಮಾರುಕಟ್ಟೆಯಲ್ಲಿ ಜನತೆ ಹಬ್ಬಕ್ಕೆ ಸಾಮಗ್ರಿಗಳನ್ನು ಕೊಳ್ಳುತ್ತಿರುವ ದೃಶ್ಯ ಸಾಮಾನ್ಯವಾಗಿದೆ. ಗ್ರಾಮಾಂತರ ಪ್ರದೇಶಗಳಲ್ಲಿ ರೈತರು ರಾಸುಗಳಿಗೆ ಅಲಂಕರಿಸಿ, ಕಿಚ್ಚು ಹಾಯಿಸುವುದು, ಕಾಟಿಮ ರಾಯನ ಪೂಜೆ ಕೈಗೊಳ್ಳವ ಆಚರಣೆಗಳಿಗೆ ಸಿದ್ದತೆಗಳನ್ನು ಕೈಗೊಳ್ಳುತ್ತಿದ್ದಾರೆ. ಬೆಂಗಳೂರಿನಲ್ಲಿ ವರ್ಷದ ಮೊದಲ ಹಬ್ಬ ಮಕರ ಸಂಕ್ರಾಂತಿ ಆಚರಣೆಗೆ ಜನರು ಸಿದ್ಧತೆಯಲ್ಲಿ ತೊಡಗಿದ್ದು, ಹಬ್ಬಕ್ಕೆ ಬೇಕಾದ ವಸ್ತುಗಳನ್ನು ಖರೀದಿಸುತ್ತಿದ್ದಾರೆ. ಮೈಸೂರಿನ ಚಿಕ್ಕಗಡಿಯಾರ, ದೇವರಾಜ ಮಾರುಕಟ್ಟೆ ಸೇರಿದಂತೆ ವಿವಿಧ ಕಡೆಗಳಲ್ಲಿ ಹೂವು-ಹಣ್ಣು, ಪೂಜಾ ಸಾಮಾಗ್ರಿಗಳ ಜೊತೆಗೆ ಎಳ್ಳು- ಬೆಲ್ಲ ಕಬ್ಬು ಖರೀದಿಯಲ್ಲಿ ನಿರತರಾಗಿದ್ದಾರೆ.

<><*<><>*><>

ಬಿಬಿಎಂಪಿ ವ್ಯಾಪ್ತಿಯಲ್ಲಿ ೨೦೨೪-೨೫ನೇ ಸಾಲಿನ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳ ಆಹ್ವಾನಿಸಲಾಗಿದೆ. ಫೆಬ್ರವರಿ ೪ ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಕಲ್ಯಾಣ ವಿಭಾಗದ ವಿಶೇಷ ಆಯುಕ್ತರಾದ ಸುರಳ್ಕರ್ ವಿಕಾಸ್ ಕಿಶೋರ್ ತಿಳಿಸಿದ್ದಾರೆ. ಪಾಲಿಕೆ ವ್ಯಾಪ್ತಿಯಲ್ಲಿನ ಎಲ್ಲಾ ವರ್ಗಗಳ ಪೌರಕಾರ್ಮಿಕರು, ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳು, ಆರ್ಥಿಕವಾಗಿ ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗ, ವಿಶೇಷ ಚೇತನರ ವರ್ಗ, ತೃತೀಯ ಲಿಂಗಿಗಳು ಮತ್ತು ಮಹಿಳಾ ವರ್ಗದ ಅರ್ಹ ಅಭ್ಯರ್ಥಿಗಳಿಂದ ಭೌತಿಕ ಹಾಗೂ ಅಂತರ್ಜಾಲ ತಂತ್ರಾಂಶದ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಆಯಾ ವಲಯಗಳ ಸಹಾಯಕ ಕಂದಾಯ ಅಧಿಕಾರಿಗಳ ಕಛೇರಿಗಳಲ್ಲಿ ಸಲ್ಲಿಸಬಹುದು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>